ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಈ ವೆಚ್ಚವನ್ನು ಯಾವ ರೀತಿ ಭರಿಸಲಾಗುವುದು ? (ಯೋಜನಾವಾರು ವಿವರ ನೀಡುವುದು)

ಸಮಾಜ ಕಲ್ಯಾಣ ಇಲಾಖೆಯಡಿ ವಸತಿ ಶಾಲೆಗಳು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) -

38 (242) ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ವಸತಿಶಾಲೆವಾರು ಪ್ರತ್ಯೇಕವಾಗಿ ಮಾಹಿತಿ ಒದಗಿಸುವುದು)

(ಆ) ಸದರಿ ಶಾಲೆಗಳಲ್ಲಿ ಮಂಜೂರಾಗಿರುವ ಬೋಧಕ/ಬೋಧಕೇತರ ಹಾಗೂ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಶಾಲೆಯಲ್ಲಿನ ಬೋಧಕ/ಬೋಧಕೇತರರಿಗೆ ನೀಡುತ್ತಿರುವ ಸೌಲಭ್ಯಗಳನ್ನು ಮೇಲ್ಕಂಡ ವಸತಿ ಶಾಲೆಗಳಲ್ಲಿ ಖಾಯಂ ಬೋಧಕ/ಬೋಧಕೇತರರಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ಬೋಧಕ/ಬೋಧಕೇತರರನ್ನು ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಲು ಇರುವ ಕಾನೂನಿನ ತೊಡಕುಗಳೇನು ? (ವಿವರ ನೀಡುವುದು)